ಕರ್ನಾಟಕ ಸರ್ಕಾರ

# ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ಶೈವಿ/45/ಪ್ರವೇಶಾತಿ ಮಾರ್ಗಸೂಚಿ/2020-21

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತರ ಕಛೇರಿ
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ, ಬೆಂಗಳೂರು
ದಿನಾಂಕ:29.07.2020

## ಸುತ್ತೋಲೆ

**ವಿಷಯ:** 2020-21ನೇ ಸಾಲಿನಿಂದ ಇಲಾಖಾ ವ್ಯಾಪ್ತಿಯ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಆನ್‌ಲೈನ್ ಪ್ರವೇಶ ಪ್ರಕ್ರಿಯೆಯನ್ನು ಅನುಷ್ಠಾನಗೊಳಿಸುವ ಬಗ್ಗೆ.

**ಉಲ್ಲೇಖ :** ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ:14.07.2020.

********

ರಾಜ್ಯದ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರವೇಶ ಪ್ರಕ್ರಿಯೆಯನ್ನು ಕೈಗೊಳ್ಳಲು ಉಲ್ಲೇಖಿತ ಸುತ್ತೋಲೆಯಲ್ಲಿ ಮಾರ್ಗಸೂಚಿಗಳನ್ನು ಜಾರಿಗೊಳಿಸಲಾಗಿರುತ್ತದೆ. ಮುಂದುವರೆದು 2020-21ನೇ ಸಾಲಿನಲ್ಲಿ ಪ್ರಥಮ ಪದವಿ ತರಗತಿಗಳ ಪ್ರವೇಶ ಪ್ರಕ್ರಿಯೆಯನ್ನು ಆನ್‌ಲೈನ್ ಮೂಲಕ ನಡೆಸುವಂತೆ ತೀರ್ಮಾನಿಸಲಾಗಿದ್ದು, ಈ ಸಂಬಂಧ, ಕೆಳಗೆ ನಮೂದಿಸಲಾಗಿರುವ ಮಾರ್ಗಸೂಚಿಗಳನ್ನು ಅನುಸರಿಸಿ ಪ್ರವೇಶಾತಿಯನ್ನು ನೀಡಲು ಸೂಚಿಸಲಾಗಿದೆ.

**ಮಾರ್ಗಸೂಚಿಗಳು:**

1. ಆನ್‌ಲೈನ್ ಅರ್ಜಿ ಸಲ್ಲಿಸಲು ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ತಂತ್ರಾಂಶವನ್ನು ಸಿದ್ಧಪಡಿಸಲಾಗಿದೆ.
2. ಆನ್‌ಲೈನ್ ಅರ್ಜಿಯನ್ನು ಸುಲಭವಾಗಿ ಮೊಬೈಲ್ ಮೂಲಕವು ಸಲ್ಲಿಸಬಹುದಾಗಿದೆ.
3. ಪ್ರತಿಯೊಬ್ಬ ವಿದ್ಯಾರ್ಥಿಯು ಪ್ರಥಮ ವರ್ಷದ ಪ್ರವೇಶಾತಿಗಾಗಿ ಆನ್‌ಲೈನ್ ಮೂಲಕವೇ ಅರ್ಜಿ ಸಲ್ಲಿಸುವುದು.
4. **ವಿವಿಧ ಕಾರಣಗಳಿಗಾಗಿ ವಿದ್ಯಾರ್ಥಿ ಆನ್‌ಲೈನ್ ಅರ್ಜಿಯನ್ನು ಸಲ್ಲಿಸಲು ಸಾಧ್ಯವಾಗದೇ ಇದ್ದ ಸಂಧರ್ಭದಲ್ಲಿ ಕಾಲೇಜಿನಿಂದ ಮುದ್ರಿತ ಅರ್ಜಿಯನ್ನು ಪಡೆದು ಭರ್ತಿಮಾಡಿ ಪಿಯು/12 ನೇ ತರಗತಿಯ ಅಂಕಪಟ್ಟಿಯ ದೃಢೀಕೃತ ಪ್ರತಿಯೊಂದಿಗೆ ಕಾಲೇಜಿಗೆ ಸಲ್ಲಿಸುವುದು. ಹೀಗೆ ಪಡೆದ ಅರ್ಜಿಯಲ್ಲಿನ ವಿವರಗಳನ್ನು ಕಾಲೇಜಿನ ಲಾಗ್-ಇನ್ ಮೂಲಕ ಆನ್‌ಲೈನ್ ಅರ್ಜಿ ಟೆಂಪ್ಲೇಟ್‌ನಲ್ಲಿ ಭರ್ತಿಮಾಡಲು ಕಾಲೇಜು ಕ್ರಮಕೈಗೊಳ್ಳುವುದು.**
5. **ವಿದ್ಯಾರ್ಥಿಗಳು ಈಗಾಗಲೇ ಮ್ಯಾನ್ಯುಯಲ್ ಅರ್ಜಿ ಸಲ್ಲಿಸಿದ್ದಲ್ಲಿ ಸದರಿ ಅರ್ಜಿಗಳಲ್ಲಿನ ವಿವರಗಳನ್ನು ಕಾಲೇಜಿನ ಲಾಗ್-ಇನ್ ಮೂಲಕ ಆನ್‌ಲೈನ್ ಅರ್ಜಿ ಟೆಂಪ್ಲೇಟ್‌ನಲ್ಲಿ ಭರ್ತಿಮಾಡಲು ಕಾಲೇಜು ಕ್ರಮಕೈಗೊಳ್ಳುವುದು.**
6. ಪಿಯು/12 ನೇ ತರಗತಿಯ ದೃಢೀಕೃತ ಅಂಕಪಟ್ಟಿಯ ಸ್ಕ್ಯಾನ್ಡ್ ಪ್ರತಿಯೊಂದಿಗೆ ವಿದ್ಯಾರ್ಥಿಗಳು ಪ್ರಥಮ ವರ್ಷದ ಪದವಿ ಪ್ರವೇಶಾತಿಗಾಗಿ ಕೆಳಕಂಡ ವೆಬ್-ಲಿಂಕ್ ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಬಹುದು.

   https://dce.kar.nic.in/DCEadmissions/Admissionform.aspx
7. ಆನ್‌ಲೈನ್ ಅರ್ಜಿಯಲ್ಲಿ ವಿದ್ಯಾರ್ಥಿಯು ಇಚ್ಛಿಸುವ 10 ಕಾಲೇಜು-ಕೋರ್ಸು/ ಕಾಂಬಿನೇಷನ್‌ಗಳನ್ನು ಆದ್ಯತೆ ಮೇರೆಗೆ ಆಯ್ಕೆ ಮಾಡಿಕೊಳ್ಳಬಹುದು.
8. ಪ್ರಥಮ ಪದವಿ ತರಗತಿಗೆ ಪ್ರವೇಶಾತಿಗಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಸಹಾಯ ಕೋರುವ ವಿದ್ಯಾರ್ಥಿಗಳಿಗಾಗಿ ಕಾಲೇಜುಗಳ ಹಂತದಲ್ಲಿ help-deskಅನ್ನು ವ್ಯವಸ್ಥೆಗೊಳಿಸತಕ್ಕದ್ದು.
9. ವಿದ್ಯಾರ್ಥಿಯ ಆದ್ಯತೆ / ಮೆರಿಟ್ / ರೋಸ್ಟರ್ ಆಧಾರದ ಮೇಲೆ ಆಯ್ಕೆ ಪಟ್ಟಿಯನ್ನು ತಂತ್ರಾಂಶದಲ್ಲಿ ಸಿದ್ಧಪಡಿಸಿ ಸಂಬಂಧಿಸಿದ ವಿದ್ಯಾರ್ಥಿಗೆ ಎಸ್.ಎಂ.ಎಸ್. ಮೂಲಕ ಮಾಹಿತಿ ರವಾನಿಸಲಾಗುವುದು ಹಾಗೂ ಸಂಬಂಧಪಟ್ಟ ಕಾಲೇಜುಗಳಿಗೆ ಆಯ್ಕೆಪಟ್ಟಿಯನ್ನು ರವಾನಿಸಲಾಗುವುದು.

..2

10. ಆಯ್ಕೆ ಪಟ್ಟಿಯನ್ನು ಪ್ರತಿ ಶನಿವಾರ ವಿದ್ಯಾರ್ಥಿಗಳಿಗೆ ಮತ್ತು ಕಾಲೇಜುಗಳಿಗೆ ಲಭ್ಯಗೊಳಿಸಲಾಗುವುದು.

11. ಆಯ್ಕೆ ಪಟ್ಟಿಯ ಅನುಸಾರವಾಗಿ ವಿದ್ಯಾರ್ಥಿಗಳು ಕಾಲೇಜಿಗೆ ಭೇಟಿ ನೀಡಿ ಈ ಕೆಳಕಂಡ ದಾಖಲೆಗಳನ್ನು ಸಲ್ಲಿಸಿ ನಿಗಧಿತ ಶುಲ್ಕ ಪಾವತಿಸಿದ ನಂತರ On-line Portal ಮೂಲಕ ಪ್ರವೇಶಾತಿ ಮಾಡಿಕೊಳ್ಳುವುದು.
    - 2 photos (passport size)
    - SSLC/10th Marks card
    - PUC/12th Marks card
    - Caste/Income Certificate (for claiming reservation/ fee concession)
    - Transfer Certificate (If available/ Issued by the college previously studied)
    - Migration Certificate (for those studied outside Karnataka)

12. ಪ್ರಾಂಶುಪಾಲರು ಕೆಳಕಂಡ ವೆಬ್-ಲಿಂಕ್ ಮೂಲಕ Login ಆಗಿ ಅಲ್ಲಿ ಲಭ್ಯವಾಗುವ Selection list ಅನ್ನು ಡೌನ್‌ಲೋಡ್ ಮಾಡಿಕೊಂಡು ಆನ್‌ಲೈನ್ ಅರ್ಜಿಯಲ್ಲಿನ ಮಾಹಿತಿ ಮತ್ತು ವಿದ್ಯಾರ್ಥಿ ಸಲ್ಲಿಸುವ ದಾಖಲೆಗಳನ್ನು ಪರಿಶೀಲಿಸಿ ಚಾಲ್ತಿಯಲ್ಲಿರುವ ರೋಸ್ಟರ್ ಪದ್ಧತಿಯಂತೆ ಪ್ರವೇಶಾತಿ ಪ್ರಕ್ರಿಯೆಯನ್ನು ಕೈಗೊಳ್ಳುವುದು.

    https://dce.kar.nic.in/DCEadmissions/login.aspx

13. ಕಾಲೇಜಿನಲ್ಲಿ ಲಭ್ಯವಿರುವ ಎಲ್ಲಾ ಕೋರ್ಸ್ / ಕಾಂಬಿನೇಷನ್‌ಗಳಿಗೆ ಆನ್‌ಲೈನ್ ಪೋರ್ಟಲ್‌ನಲ್ಲಿ ದಾಖಲಿಸಿದ ಅರ್ಜಿಗಳನ್ನು ಆಧರಿಸಿ ಮಾತ್ರ ಪ್ರವೇಶ ಮಾಡಿಕೊಳ್ಳುವುದು.

14. ಪ್ರಥಮ ಪದವಿ ಪ್ರವೇಶಕ್ಕೆ ಸಂಬಂಧಿಸಿದಂತೆ ಈಗಾಗಲೇ ಹೊರಡಿಸಿರುವ ಇಲಾಖೆಯ ಸುತ್ತೋಲೆಯಲ್ಲಿನ ಹಾಗೂ ವಿಶ್ವವಿದ್ಯಾಲಯಗಳ ಇತರೆ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸುವುದು.

15. Covid-19 ಹಿನ್ನೆಲೆಯಲ್ಲಿ ಕಾಲೇಜುಗಳಲ್ಲಿ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡು ಪ್ರವೇಶಾತಿ ಪ್ರಕ್ರಿಯೆಯನ್ನು ನಡೆಸುವುದು.

16. ಆನ್‌ಲೈನ್ ಪ್ರವೇಶಕ್ಕೆ ಕೇಂದ್ರ ಸಹಾಯವಾಣಿಗಳು:
    - **Mobile / WhatsApp Numbers:** 8277735113, 8277573373
    - **E-mail Address:** dceadmissions2020@gmail.com

ವಿದ್ಯಾರ್ಥಿಗಳು / ಪೋಷಕರಿಗೆ ಪ್ರವೇಶಾತಿಯಲ್ಲಿ ಯಾವುದೇ ರೀತಿಯ ತೊಂದರೆಯಾಗದಂತೆ ಕಾಲೇಜಿನ ಹಂತದಲ್ಲಿ ಸೂಕ್ತ ಮಾಹಿತಿಯನ್ನು ಒದಗಿಸುವುದರೊಂದಿಗೆ ಯಾವುದೇ ಲೋಪದೋಷಗಳಿಗೆ ಆಸ್ಪದ ನೀಡದಂತೆ ಪ್ರವೇಶಾತಿ ಪ್ರಕ್ರಿಯೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವುದು.

**ಆಯುಕ್ತರು,**
ಕಾಲೇಜು ಮತ್ತು ತಾಂತ್ರಿಕ ಮತ್ತು ತಾಂತ್ರಿಕ ಶಿಕ್ಷಣ

ಇವರಿಗೆ:
**ರಾಜ್ಯದ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.**

ಪ್ರತಿಯನ್ನು:
1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ- ಅಗತ್ಯ ಕ್ರಮಕ್ಕಾಗಿ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು- ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
3. ಮಾನ್ಯ ಆಯುಕ್ತರ, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ ಮತ್ತು ಜಂಟಿ ನಿರ್ದೇಶಕರ ಆಪ್ತ ಶಾಖೆ- ಮಾಹಿತಿಗಾಗಿ.
4. ಕಛೇರಿ ಪ್ರತಿ.